ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 197 |
| ಸದಸ್ಯರ ಹೆಸರು | : | ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 06-12-2023 |
| ಉತ್ತರಿಸುವ ಸಚಿವರು | : | ಲೋಕೋಪಯೋಗಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಮಂಡ್ಯ ಜಿಲ್ಲೆಯ ವಿವಿಧ ಗ್ರಾಮಗಳಿಗೆ ಹೊಂದಿಕೊಂಡಂತೆ ಬೆಂಗಳೂರು-ಮೈಸೂರು ರಾಷ್ಟ್ರೀಯ ಹೆದ್ದಾರಿ-275ರ ಸರ್ವೀಸ್ ರಸ್ತೆಯ ಇಕ್ಕೆಲಗಳಲ್ಲಿನ ಡ್ರೈನೇಜ್ ಕಾಮಗಾರಿಗಳು ಅಪೂರ್ಣ ಮತ್ತು ಅವೈಜ್ಞಾನಿಕವಾಗಿರುವುದು, ರೋಡ್ ಹಂಪ್ಸ್ ಅವೈಜ್ಞಾನಿಕವಾಗಿ ನಿರ್ಮಿಸಿರುವುದು, ಬೀದಿ ದೀಪಗಳನ್ನು ಅಳವಡಿಸದಿರುವುದು ಸೇರಿದಂತೆ ಅನೇಕ ಸಮಸ್ಯೆಗಳ ಕಾರಣ ಸಾರ್ವಜನಿಕರ ಸುರಕ್ಷತೆಗೆ ಧಕ್ಕೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>ಬೆಂಗಳೂರು-ಮೈಸೂರು ರಾಷ್ಟ್ರೀಯ ಹೆದ್ದಾರಿ-275ರ ಕಾಮಗಾರಿಯನ್ನು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ವತಿಯಿಂದ ಕೈಗೊಳ್ಳಲಾಗುತ್ತಿದ್ದು, ಮಂಡ್ಯ ಜಿಲ್ಲೆಯ ಕೋಡಿಶೆಟ್ಟಿಪುರ, ಗಣಗೂರು ಮತ್ತು ಇಂಡುವಾಳು ಗ್ರಾಮಗಳಲ್ಲಿ ರಾಷ್ಟ್ರೀಯ ಹೆದ್ದಾರಿ-275ರ ಸರ್ವೀಸ್ ರಸ್ತೆಯಲ್ಲಿ ಅಪೂರ್ಣವಾದ ಚರಂಡಿ ನಿರ್ಮಾಣ ಕಾಮಗಾರಿಯನ್ನು ರಿಯಾಯಿತಿದಾರರಿಂದ ಈಗಾಗಲೇ ಆರಂಭಿಸಲಾಗಿದ್ದು, ಕಾಮಗಾರಿ ಪ್ರಗತಿಯಲ್ಲಿದೆ. ಇದಲ್ಲದೇ, ಅಂಡರ್‌ಪಾಸ್ ಸ್ಥಳಗಳ ಬಳಿ ಸರ್ವೀಸ್ ರಸ್ತೆಯಲ್ಲಿನ ಅವೈಜ್ಞಾನಿಕ ರಸ್ತೆ ಹಂಪ್‌ಗಳನ್ನು ಗುರುತಿಸುವುದು ಮತ್ತು ಸರಿಪಡಿಸುವ ಸಂಬಂಧ ಪೋಲೀಸ್ ಇಲಾಖೆಯೊಂದಿಗೆ ಸಮಾಲೋಚಿಸಿ ಶೀಘ್ರದಲ್ಲೇ ಪ್ರಾರಂಭಿಸಲಾಗುವುದು ಮತ್ತು ದೀಪಗಳು ಕ್ರಿಯಾತ್ಮಕವಾಗಿವೆ ಎಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ವರದಿಸಿರುತ್ತಾರೆ. |
| ಆ) | ಬಂದಿದ್ದಲ್ಲಿ, ಈ ಎಲ್ಲಾ ಸಮಸ್ಯೆಗಳನ್ನು ಪರಿಹರಿಸಲು ತೆಗೆದುಕೊಂಡಿರುವ ಕ್ರಮಗಳೇನು; (ಸಂಪೂರ್ಣ ವಿವರಗಳನ್ನು ನೀಡುವುದು) | |
| ಇ) | NH-275 ರಲ್ಲಿ ಸಾರ್ವಜನಿಕರು ಸುರಕ್ಷಿತವಾಗಿ ರಸ್ತೆ ದಾಟಲು ಅನುಕೂಲವಾಗುವಂತೆ ಯಾವ ಯಾವ ಗ್ರಾಮಗಳಲ್ಲಿ Foot Over Bridges (FOB) ನಿರ್ಮಿಸಲು ಉದ್ದೇಶಿಸಲಾಗಿದೆ; (ವಿವರ ನೀಡುವುದು) | NH-275 ರಲ್ಲಿ 24 ಸಂಖ್ಯೆಯ ಫುಟ್ ಓವರ್ ಬ್ರಿಡ್ಜ್ ನಿರ್ಮಿಸಲು ಉದ್ದೇಶಿಸಲಾಗಿದ್ದು, ಸ್ಥಳಗಳ ವಿವರ ಕೆಳಕಂಡಂತಿವೆ: |

| Sl. No. | Chainage Km. | Village |
|---|---|---|
| 1 | 23+425 | Kaniminike |
| 2 | Km 28+320 ( Skew) | Manchanayakanahalli |
| 3 | 36.200 | Kallugoppahalli |
| 4 | 37.200 | Hulthar Hossadoddi |
| 5 | 41.400 | Madapura |
| 6 | 71.700 | Dabanagunda |
| 7 | 76.800 | Rudrakshipura |
| 8 | 77.800 | Agaralinganadoddi |
| 9 | 83.600 | Mobbalagere |
| 10 | 85.380 | Gejjalagere Industrical Area |
| 11 | 86.680 | Gejjalagere |

| | | |
|---|---|---|
| 12 | 87.230 | KMF, Gejjalagere |
| 13 | 89.845 | B.Gowdagere |
| 14 | 90.840 | Boodanuru |
| 15 | 93.920 | Boodanuru/ |
| 16 | 108.970 | Kalenahalli |
| 17 | 109.550 | Kalenahalli |
| 18 | 113.810 | Ragimiddanahalli |
| 19 | 114.880 | Siddapura |
| 20 | 117.393 | Ganguru |
| 21 | 118.360 | Gowdahalli |
| 22 | 130.920 | Brahmapura |
| 23 | 131.610 | Kalasthavadi |
| 24 | 133.695 | Siddalingapura |

| | | |
|---|---|---|
| ಈ) | NH-275 ರಲ್ಲಿ ಬರುವ ಮಂಡ್ಯ ಜಿಲ್ಲೆಯ ಮದ್ದೂರು, ಉಮ್ಮಡಹಳ್ಳಿ ಗೇಟ್, ಇಂಡುವಾಳು, ಸುಂಡಹಳ್ಳಿ, ರಾಗಿಮುದ್ದನಹಳ್ಳಿ, ಗರುಡನಉಕ್ಕಡ, ಇವು ಅಪಘಾತ ಸಂಭವಿಸಬಹುದಾದ ಸ್ಥಳಗಳು ಎನ್ನಲಾಗಿದ್ದು, ಈ ಸ್ಥಳಗಳಲ್ಲಿ ಸರಾಸರಿ ಎತ್ತರ ಹೆಚ್ಚಿಸುವುದರ ಜೊತೆಗೆ (raising of median height) ಸೈನ್ ಬೋರ್ಡ್‌ಗಳು, ರಸ್ತೆ ಗುರುತುಗಳನ್ನು ಅಳವಡಿಸುವಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು) | NH-275 ರಲ್ಲಿ ಬರುವ ಮಂಡ್ಯ ಜಿಲ್ಲೆಯ ಮದ್ದೂರು, ಉಮ್ಮಡಹಳ್ಳಿ ಗೇಟ್, ಇಂಡುವಾಳು, ಸುಂಡಹಳ್ಳಿ, ರಾಗಿಮುದ್ದನಹಳ್ಳಿ, ಗರುಡನಉಕ್ಕಡ, ಇವು ಅಪಘಾತ ಸಂಭವಿಸಬಹುದಾದ ಸ್ಥಳಗಳು ಎನ್ನಲಾಗಿದ್ದು, ಈ ಸ್ಥಳಗಳಲ್ಲಿ ಸರಾಸರಿ ಎತ್ತರ ಹೆಚ್ಚಿಸುವುದರ ಜೊತೆಗೆ (raising of median height) ಸೇರಿದಂತೆ ಹೆಚ್ಚುವರಿ ಸೂಚನಾ ಫಲಕಗಳು ಮತ್ತು ಇತರೆ ರಸ್ತೆ ಸುರಕ್ಷತಾ ಕ್ರಮಗಳು ಕೈಗೊಳ್ಳುವ ಕಾಮಗಾರಿಯ ಟೆಂಡರಿಂಗ್ ಪೂರ್ಣಗೊಂಡಿದ್ದು, ಗುತ್ತಿಗೆಯನ್ನು ದಿನಾಂಕ: 09.11.2023 ರಂದು ನೀಡಲಾಗಿದೆ ಮತ್ತು ಜನವರಿ 2024ರಲ್ಲಿ ಕೆಲಸವನ್ನು ಪ್ರಾರಂಭಿಸಲಾಗುವುದೆಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರರವರು ವರದಿಸಿರುತ್ತಾರೆ. |

ಕಡತ ಸಂಖ್ಯೆ: ಲೋಇ 241 ಸಿಎನ್‌ಹೆಚ್ 2023 (ಇ)

(ಸತೀಶ ಜಾರಕಿಹೊಳಿ)
ಲೋಕೋಪಯೋಗಿ ಸಚಿವರು